ಬೈಲಹೊಂಗಲ ಕ್ಷೇತ್ರದಲ್ಲಿ ಕಾಂಗ್ರೆಸ್ ಪಕ್ಷಕ್ಕೆ ಮುನ್ನಡೆ ಖಚಿತ: ಶಾಸಕ ಮಹಾಂತೇಶ್ ಕೌಜಲಗಿ

ಅಭ್ಯರ್ಥಿ ಮೃಣಾಲ್ ಹೆಬ್ಬಾಳ್ಕರ್ ಪರ ಬಿರುಸಿನ ಪ್ರಚಾರ

ಬೆಳಗಾವಿ : ಬೆಳಗಾವಿ ಲೋಕಸಭಾ ಕ್ಷೇತ್ರದಲ್ಲಿ ಕಾಂಗ್ರೆಸ್ ಪಕ್ಷ ಗೆಲ್ಲುವುದು ಗ್ಯಾರಂಟಿ. ಬೈಲಹೊಂಗಲ ಕ್ಷೇತ್ರದಲ್ಲಿ ನಮ್ಮ ಅಭ್ಯರ್ಥಿ ಮೃಣಾಲ್ ಹೆಬ್ಬಾಳ್ಕರ್ ಅತ್ಯಧಿಕ ಮತಗಳಿಂದ ಮುನ್ನಡೆ ಗಳಿಸುವರು ಎಂದು ಬೈಲಹೊಂಗಲ ಕ್ಷೇತ್ರದ ಶಾಸಕ ಮಹಾಂತೇಶ್ ಕೌಜಲಗಿ ಹೇಳಿದರು.

ಬೈಲಹೊಂಗಲ ವಿಧಾನ ಸಭಾ ಕ್ಷೇತ್ರದ ವ್ಯಾಪ್ತಿಯ ಬುಡರಕಟ್ಟಿ, ಗೋವನಕೊಪ್ಪ, ದೊಡವಾಡ ಹಾಗೂ ಕರೀಕಟ್ಟಿ ಗ್ರಾಮಗಳಲ್ಲಿ ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ಅವರ ಜೊತೆಗೂಡಿ ಕಾಂಗ್ರೆಸ್ ಅಭ್ಯರ್ಥಿ ಮೃಣಾಲ್ ಹೆಬ್ಬಾಳ್ಕರ್ ಪರ ಮತಯಾಚಿಸಿದ ಶಾಸಕರು, ಬೈಲಹೊಂಗಲ ಭಾಗದಲ್ಲಿ ಕಾಂಗ್ರೆಸ್ ಪಕ್ಷ ಬಲಿಷ್ಠವಾಗಿದ್ದು, ಈ ಬಾರಿ ಕಾಂಗ್ರೆಸ್ ಗೆಲುವು ಖಚಿತ ಎಂದು ವಿಶ್ವಾಸ ವ್ಯಕ್ತಪಡಿಸಿದರು.

ಕಾಂಗ್ರೆಸ್ ಅಭ್ಯರ್ಥಿ ಮೃಣಾಲ್ ಹೆಬ್ಬಾಳ್ಕರ್ ಯೋಗ್ಯ ಅಭ್ಯರ್ಥಿ ಆಗಿದ್ದು, ಈ ಬಾರಿ ಕಾಂಗ್ರೆಸ್ ಪಕ್ಷಕ್ಕೆ ಉತ್ತಮ ವಾತಾವರಣ ನರ್ಮಾಣವಾಗಿದೆ. ಕ್ಷೇತ್ರದ ಅಭಿವೃದ್ಧಿಗೆ ತನ್ನದೇ ಕನಸು ಕಂಡಿರುವ ಮೃಣಾಲ್ ಹೆಬ್ಬಾಳ್ಕರ್, ತಾಯಿ ಲಕ್ಷ್ಮೀ ಹೆಬ್ಬಾಳ್ಕರ್ ಅವರ ಮಾರ್ಗದರ್ಶನದಲ್ಲಿ ಅಭಿವೃದ್ಧಿ ಕಾರ್ಯಗಳನ್ನು ಕೈಗೊಳ್ಳಲಿದ್ದಾರೆ. 2023ರ ವಿಧಾನಸಭಾ ಚುನಾವಣೆಯಲ್ಲಿ ನನಗೆ ಬೆಂಬಲಿಸಿದಂತೆ ಈ ಬಾರಿಯೂ ಕಾಂಗ್ರೆಸ್ ಪಕ್ಷವನ್ನು ಬೆಂಬಲಿಸಬೇಕು ಎಂದು ಶಾಸಕರು ಮನವಿ ಮಾಡಿದರು.

ಜಗದೀಶ್ ಶೆಟ್ಟರ್ ಗೆ ಅಧಿಕಾರ ಮೋಹ

ಬಿಜೆಪಿ ಅಭ್ಯರ್ಥಿ ಜಗದೀಶ್ ಶೆಟ್ಟರ್ ಅವರಿಗೆ ಅಧಿಕಾರ ಮೋಹ. ಮುಖ್ಯಮಂತ್ರಿ ಆದಮೇಲೂ ಮತ್ತೊಬ್ಬ ಮುಖ್ಯಮಂತ್ರಿಯ ಕ್ಯಾಬಿನೆಟ್ ನಲ್ಲಿ ಸಚಿವರಾಗ್ತಾರೆ. ಇದು ಕರ್ನಾಟಕ ರಾಜಕೀಯ ಇತಿಹಾಸದಲ್ಲೆ ಮೊದಲು. ಇಂಥ ಸಮಯ ಸಾಧಕ ರಾಜಕಾರಣಿಯನ್ನು ಬೆಳಗಾವಿಯಿಂದ ದೂರ ಇಡಬೇಕು ಎಂದು ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ಕಿಡಿಕಾರಿದರು. ಒಂದೆರಡು, ಸೋಫಾ, ಒಂದೆರಡು ಕುರ್ಚಿ, ಮೇಜುಗಳನ್ನು ತಂದು ಬಾಡಿಗೆ ಮನೆಗೆ ತಂದಿಟ್ಟು, ಇಲ್ಲೆ ಮನೆ ಮಾಡಿರುವೆ ಎಂದು ಶೆಟ್ಟರ್ ಹೊಸ ನಾಟಕ ಶುರು ಮಾಡಿದ್ದಾರೆ. ವ್ಯವಹಾರಿಕವಾಗಿ ಸಂಪೂರ್ಣ ಹುಬ್ಬಳ್ಳಿ ವ್ಯಕ್ತಿಯಾಗಿರುವ ಜಗದೀಶ್ ಶೆಟ್ಟರ್ ಅವರನ್ನು ಬೆಳಗಾವಿ ಜನ ಒಪ್ಪಿಕೊಳ್ಳುವುದಿಲ್ಲ ಎಂದು ಸಚಿವರು ಹೇಳಿದರು. ಕ್ಷೇತ್ರದೊಂದಿಗೆ ಭಾವನಾತ್ಮಕ ನಂಟು ಇಟ್ಟಿಕೊಂಡರಷ್ಟೇ ಜನರ ಮನಸ್ಸು ಗೆಲ್ಲಲು ಸಾಧ್ಯ ಎಂದು ಹೇಳಿದರು.

ಮೃಣಾಲ್ ಹೆಬ್ಬಾಳ್ಕರ್ 2 ಲಕ್ಷ ಮತಗಳ ಅಂತರದಿಂದ ಗೆಲುವು ಸಾಧಿಸಲಿದ್ದಾನೆ ಎಂದು ಸಚಿವರು ವಿಶ್ವಾಸ ವ್ಯಕ್ತಪಡಿಸಿದರು. ನನಗೆ ಎಂಪಿ ಆಗಬೇಕು ಎಂಬ ಕನಸಿತ್ತು. ಆದರೆ ಸಾಧ್ಯವಾಗಲಿಲ್ಲ. ಇದೀಗ ನನ್ನ ಮಗನ ಮೂಲಕ ಆ ಕನಸನ್ನು ನವೆಲ್ಲರೂ ಸೇರಿ ಈಡೇರಿಸಬೇಕು ಎಂದು ಸಚಿವರು ಹೇಳಿದರು.ಬೆಳಗಾವಿಯ ಮಗನಾದ ನಾನು ನಮ್ಮೆಲ್ಲರ ಧ್ವನಿಯಾಗಿ ದೆಹಲಿಯಲ್ಲಿ ಕೆಲಸ ಮಾಡುವೆ. ಕರ್ನಾಟಕಕ್ಕೆ ಬೆಳಗಾವಿ ಜಿಲ್ಲೆಗೆ ಬರಬೇಕಾದ ಅನುಧಾನ, ಯೋಜನೆಗಳನ್ನು ತರುವೆ. ಕಳೆದ 20 ವರ್ಷಗಳಿಂದ ಬಿಜೆಪಿ ಸಂಸದರಿದ್ದರೂ ಯಾವುದೇ ಪ್ರಯೋಜನವಿಲ್ಲ. ಅಭಿವೃದ್ಧಿ ಬಗ್ಗೆ ಸಂಪೂರ್ಣ ನರ್ಲಕ್ಷ್ಯ ವಹಿಸಿದರು ಎಂದು ಕಾಂಗ್ರೆಸ್ ಅಭ್ಯರ್ಥಿ ಮೃಣಾಲ್ ಹೆಬ್ಬಾಳ್ಕರ್ ಹೇಳಿದರು.

ಪ್ರಚಾರಕ್ಕೂ ಮುನ್ನ ವಿವಿಧ ಗ್ರಾಮಸ್ಥರು ಪಟಾಕಿ ಸಿಡಿಸಿ, ವಿಜೃಂಭಣೆಯಿಂದ ಮೆರವಣಿಗೆ ಮೂಲಕ ಬರಮಾಡಿಕೊಂಡರು, ಎಲ್ಲೆಡೆ ಸಚಿವರಿಗೆ ಮತ್ತು ಅಭ್ಯರ್ಥಿ ಮೃಣಾಲ ಹೆಬ್ಬಾಳಕರ್ ಅವರಿಗೆ ಅದ್ದೂರಿಯ ಸ್ವಾಗತ ಸಿಕ್ಕಿತು.

ಆಯಾ ಗ್ರಾಮದ ಪ್ರಚಾರದ ವೇಳೆ ಶಿವರುದ್ರಪ್ಪ ಹಟ್ಟಿಹೊಳಿ, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರಾದ ಶಂಕರಗೌಡ ಪಾಟೀಲ, ಜಿಲ್ಲಾ ಯುವ ಕಾಂಗ್ರೆಸ್ ಅಧ್ಯಕ್ಷ ಕಾರ್ತಿಕ್ ಪಾಟೀಲ, ಮಹಾಂತೇಶ್ ವಡ್ಡಿಕೊಪ್ಪ, ವಿಠ್ಠಲ ಕಾಳಿ, ಶ್ರೀಶೈಲ ವಾಲಿ, ಈರಪ್ಪ ಹತ್ತಿಗಟಗಿ, ಮಹಾದೇವಿ ಬೋಡಕಿ, ಜಾನವ್ವ ಬಾವನವರ್, ಬಸನಗೌಡ ಪಾಟೀಲ, ವೀರಭದ್ರ ಡೊಂಬರಕೊಪ್ಪ, ಮಹಾಲಿಂಗ ಕಿತ್ತೂರು, ಸವದತ್ತಿ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಮಲ್ಲು ಜಕಾತಿ, ಅಸುಂಡಿ ಗ್ರಾಮ ಪಂಚಾಯಿತಿ ಅಧ್ಯಕ್ಷ ಐ.ಎಸ್. ತೋಟಿಗೆರ, ಶಶಿಧರ ಚಿಕ್ಕೋಡಿ, ಯಲ್ಲಪ್ಪ ಜಾವುರ, ಸಿದ್ದಪ್ಪ ಗೋರವಳ, ಜವಾರ್ ಉಪ್ಪಾರ ಸೇರಿದಂತೆ ನೂರಾರು ಕಾರ್ಯಕರ್ತರು ಉಪಸ್ಥಿತರಿದ್ದರು.

ರಾಷ್ಟ್ರಮಟ್ಟದ ಕಲಾಪ್ರದರ್ಶನ ಕಲಾವಿದನೆಂದೂ ಪ್ರಸಿದ್ಧಿ ಬೆನ್ನನ್ನು ಹತ್ತಬಾರದು : ದಿಲೀಪಕುಮಾರ ಕಾಳೆ

ಬೆಳಗಾವಿ :-ಕಲಾವಿದನೆಂದೂ ಪ್ರಶಸ್ತಿಗಳನ್ನು ಹುಡಿಕೊಂಡು ಹೋಗಬಾರದು. ನಮ್ಮ ಕಲೆಯನ್ನು ಹುಡಿಕೊಂಡು ಮನೆಬಾಗಿಲಿಗೆ ಬರಬೇಕು. ಅಂಥ ಅಪರೂಪದ ಕಲೆ ನಮ್ಮದಾಗಬೇಕು. ನುರಿತ ಕಲಾವಿದನಾಗಲು ಆಯುಷ್ಯದ ಅರ್ಧ ಸಮಯವೇ ಬೇಕಾಗಬಹುದು. ಆ ಸಹನೆ ನಮ್ಮಲ್ಲಿರಬೇಕು. ಪ್ರಸಿದ್ಧಿ ಬೆನ್ನನ್ನು ಕಲಾವಿದನೆಂದೂ ಹತ್ತಬಾರದು ಎಂದು ಖ್ಯಾತ ಕಲಾವಿದ ದಿಲೀಪಕುಮಾರ ಕಾಳೆ ಇಂದಿಲ್ಲಿ ಹೇಳಿದರು. ಬೆಳಗಾವಿಯ ತಿಲವಾಡಿಯ ಎರಡನೇ ರೇಲ್ವೆಗೇಟ್ ಹತ್ತಿರವಿರುವ ಕಲಾಮಹರ್ಷಿ ಕೆ. ಬಿ. ಕುಲಕರ್ಣಿ ಆರ್ಟ ಗ್ಯಾಲರಿ (ವಾರೇಕರ ನಾಟ್ಯ ಸಂಘ) ಸಭಾ ಭವನದಲ್ಲಿ ವರ್ಣಕಲಾ ಸಾಂಸ್ಕೃತಿಕ ಸಂಘ ಮತ್ತು ಶ್ರೀಮಾತಾ ಗ್ಲಾಸ್ ಆರ್ಟ ಗ್ಯಾಲರಿ ಸಂಘಟನೆಯವರಿಂದ ಇದೇ ದಿ. 14 ರವಿವಾರದಂದು ರಾಷ್ಟ್ರಮಟ್ಟದ ಕಲಾ ಪ್ರದರ್ಶನ ಉದ್ಘಾಟನೆ, ಚಿತ್ರಕಲಾ ಪ್ರದರ್ಶನ ಮತ್ತು ಮಕ್ಕಳ ಚಿತ್ರಗಳ ಆಯ್ಕೆ ಮತ್ತು ಸ್ಪರ್ಧೆ ಜರುಗಿದವು.

ಕಾರ್ಯಕ್ರಮದಲ್ಲಿ ಅತಿಥಿಗಳಾಗಿ ಆಗಮಿಸಿದ್ದ ಕಲಾವಿದ ದಿಲೀಪಕುಮಾರ ಕಾಳೆಯವರು ಮೇಲಿನಂತೆ ಹೇಳಿದರು. ಮುಂದೆ ಮಾತನಾಡುತ್ತ ಅವರು ಇಂದಿನ ಸ್ಪರ್ಧಾತ್ಮಕ ಯುಗದಲ್ಲಿ ಕಲಾವಿದನದಲ್ಲಿ ಹೊಸತನದ ಅವಶ್ಯಕತೆಯಿದೆಯಾದ್ದರಿಂದ ಚಿತ್ರಕಲೆಯಲ್ಲಿ ಹೊಸತನ ಕಂಡುಕೊಳ್ಳಬೇಕು ಅದಕ್ಕಾಗಿ ಸತತ ಪ್ರಯತ್ನ ಕಲಾವಿದನಲ್ಲಿ ಇರಬೇಕು ಎಂದು ಹೇಳಿದರು. ಕಾರ್ಯಕ್ರಮವನ್ನು ಉದ್ಘಾಟಿಸಿದ ಬೆನನ್ ಸ್ಮಿತ್ ಫೈನ್ ಆರ್ಟ ಮಹಾವಿದ್ಯಾಲಯದ ಪ್ರಾಚಾರ್ಯೆ ಶ್ರೀಮತಿ ವೃಂದಾ ಚೆನ್ ಅವರು ಮಾತನಾಡುತ್ತ ಇಂದಿನ ದಿನಗಳಲ್ಲಿ ಕಲಾವಿದನಗೆ ಪ್ರೋತ್ಸಾಹದ ಅಗತ್ಯವಿದೆ. ಕಲಾ ಮಹಾವಿದ್ಯಾಲಯಗಳಿಂದು ಮುಚ್ಚುತ್ತಿರುವುದು ಬೇಸರದ ಸಂಗತಿ. ಕಲೆಯ ಮಹತ್ವವನ್ನು ಪಾಲಕರಲ್ಲಿ ಮತ್ತು ವಿದ್ಯಾರ್ಥಿಗಳಿಗೆ ತಿಳಿಹೇಳುತ್ತ ಕಲೆಗೆ ಸಂಬಂಧಿಸಿದ ಮಹಾವಿದ್ಯಾಲಯಗಳನ್ನು ಮುಂದೆವರೆದುಕೊಂಡು ಹೋಗುವಂತೆ ಮಾಡೋಣವೆಂದು ಹೇಳಿದರು

ಸಂಘದ ಅಧ್ಯಕ್ಷರಾದ ನಾಗೇಶ ಚಿಮರೊಲ, ಕಾರ್ಯದರ್ಶಿ ಸಂತೋಷ ಮಲ್ಲೊಳ್ಳಿ, ಬಿರಾದಾರ, ವಿಜಯ ಕಾಮತ ಉಪಸ್ಥಿತರಿದ್ದರು.

ಕಲಾವಿದರಾದ ಗಣೇಶ ದೊಡಮನ, ಸಚ್ಚಿನ ಉಪಾಧ್ಯೆ, ಚಂದ್ರಶೇಖರ ಯಡ್ರಾಮಿ, ರಮೇಶ ಸಾಸನೂರ, ರಾಜಕುಮಾರ ಯಲಸ್ಕಂಗಿಕರ, ಅಜಿತ ಹುಲಮನಿ, ಅತಿಫ್ ಪಾಚಾಪುರಿ ಚಿತ್ರಪದರ್ಶನ ನಡೆಯಿತು ಮುಂದೆ ಮಕ್ಕಳ ಚಿತ್ರ ಸ್ಪರ್ಧೆ ಮತ್ತು ಪದರ್ಶನ ನಡೆಯಿತು. ದೇಮಣ್ಣ ಕಟಂಬಳೆ ನರೂಪಿಸಿದರು.

15 ಸೋಮವಾರ ದಂದು ವರ್ಣಕಲಾಶ್ರೀ ಪ್ರಶಸ್ತಿ ಪ್ರದಾನ ಸಮಾರಂಭ 2023-24 ನಡೆಯಲಿದ್ದು ಅಂತರರಾಷ್ಟ್ರೀಯ ಕಲಾವಿದರಾದ ಡಾ, ವಿಜಯ ಹಗರಗುಂಡಗಿಯವರು ಸಮಾರಂಭವನ್ನು ಉದ್ಘಾಟಿಸಲಿದ್ದಾರೆ. ನಾಗೇಶ ಚಿಮರೊಲ ಅಧ್ಯಕ್ಷತೆಯನ್ನು ವಹಿಸಲಿದ್ದಾರೆ. ನವೃತ್ತ ಉಪನ್ಯಾಸಕರಾದ ಡಾ, ಪಿ. ಜಿ. ಕೆಂಪಣ್ಣವರ ವರ್ಣಕಲಾಶ್ರೀ ಪ್ರಶಸ್ತಿ ಪ್ರದಾನ ಮಾಡಲಿದ್ದಾರೆ. ಹಿರಿಯ ಚಿತ್ರಕಲಾವಿದರಾದ ಜಗಧೀಶ ಕುಂಟೆ, ಸುಭಾಷ ದೇಸಾಯಿ, ಆರ್. ಎ. ದೇವರ್ಷಿ ಅತಿಥಿಗಳಾಗಿ ಆಗಮಿಸಲಿದ್ದಾರೆ.

ಅಂಬೇಡ್ಕರ್ ಮೂರ್ತಿಯಾಗದೆ ಸ್ಫೂರ್ತಿಯಾಗಲಿ : ಸಾಹಿತಿ ಡಾ. ರಾಜಶೇಖರ ಬಿರಾದಾರ

ಯರಗಟ್ಟಿ : ಅಸ್ಪೃಶ್ಯತೆ ಮತ್ತು ಅಸಮಾನತೆಯ ಆಂದೋಲನ ಪ್ರಾರಂಭಿಸಿ ಶೋಷಿತ ವರ್ಗಕ್ಕೆ ನ್ಯಾಯ ಒದಗಿಸಲು ಮಹಾನ್ ಹೋರಾಟ ನಡೆಸಿದ ದೇಶದ ಮಹಾನಾಯಕ ಭಾರತ ರತ್ನ ಬಾಬಾ ಸಾಹೇಬ್ ಡಾ. ಬಿ.ಆರ್. ಅಂಬೇಡ್ಕರ್ ಅವರನ್ನು ಮೂರ್ತಿಯನ್ನಾಗಿಸಿ ಪೂಜೆಗೆ ಸೀಮಿತಗೊಳಿಸದೆ ನಮ್ಮ ಬದುಕು ಉಜ್ವಲಗೊಳಿಸುವ ಸ್ಫೂರ್ತಿಯಾಗಲಿ ಎಂದು ಸಾಹಿತಿ ಡಾ. ರಾಜಶೇಖರ ಬಿರಾದಾರ ಅವರು ತಿಳಿಸಿದರು.ಯರಗಟ್ಟಿ ಪಟ್ಟಣದ ತಹಶೀಲ್ದಾರ ಕಚೇರಿ ಆವರಣದಲ್ಲಿ ಆಯೋಜಿಸಿದ ಸಂವಿಧಾನ ಶಿಲ್ಪಿ ಡಾ. ಬಿ. ಆರ್. ಅಂಬೇಡ್ಕರ್ ಅವರ 133ನೇ ಜಯಂತಿ ಕಾರ್ಯಕ್ರಮದಲ್ಲಿ ಬಾಬಾ ಸಾಹೇಬ್ ಅಂಬೇಡ್ಕರ್ ಅವರ ಪ್ರತಿಮೆಕ್ಕೆ ಪುಳ್ಪನಮನ ಸಲ್ಲಿಸಿ ಮಾತನಾಡಿದರು. ಡಾ. ಬಾಬಾ ಸಾಹೇಬ್ ಅಂಬೇಡ್ಕರ್ ಅವರು ಯಾವುದೇ ಒಂದು ಸಮುದಾಯಕ್ಕೆ ಸೀಮಿತರಲ್ಲ, ಅವರು ದೇಶಕ್ಕೆ ಸಂವಿಧಾನ ರಚನಾ ಕರಡು ಸಮಿತಿಯ ಅಧ್ಯಕ್ಷರಾಗಿ, ಸಮಾಜಶಾಸ್ತ್ರಜ್ಞರಾಗಿ, ಅರ್ಥಶಾಸ್ತ್ರಜ್ಞರಾಗಿ, ಇತಿಹಾಸಕಾರರಾಗಿ ಹೀಗೆ ಅವರಿಗೆ ತಿಳಿಯದ ಕ್ಷೇತ್ರವಿರಲಿಲ್ಲ ಎಂದು ನುಡಿದರು. ಹಿಂದುಳಿದವರನ್ನು ಸಮಾಜದ ಮುಖ್ಯವಾಹಿನಿಗೆ ಕರೆತರುವ ಎಲ್ಲರ ಜೊತೆಗೆ ಕರೆದೊಯ್ಯುವ ಉದ್ದೇಶ ಅವರದಾಗಿತ್ತು ಎಂದರು.

ಭಗವಾನ್ ಮಹಾವೀರರು ಹಿಂಸಾ ಮಾರ್ಗವನ್ನು ತೊರೆದು ಅಹಿಂಸಾ ಮಾರ್ಗದಲ್ಲಿ ನಡೆಯುವಂತೆ ಜನರಿಗೆ ತಿಳಿಹೇಳುತ್ತಿದ್ದರು.

ಡಾ. ಅಂಬೇಡ್ಕರ್ ಕೂಡ ಇದೇ ಹಾದಿಯಲ್ಲಿ ನಡೆದಿದ್ದರು. ಬದುಕಬೇಕು ಮತ್ತು ಎಲ್ಲರನ್ನೂ ಬದುಕಲು ಬಿಡಬೇಕು ಎಂಬುದೇ ಈ ಇಬ್ಬರೂ ಮಹಾತ್ಮರ ಧ್ಯೇಯವಾಗಿತ್ತು. ಇದನ್ನು ನಾವೆಲ್ಲರೂ ತಮ್ಮ ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದರು.

ಕಾರ್ಯಕ್ರಮದಲ್ಲಿ ತಹಶೀಲ್ದಾರ ಎಸ್. ಎಸ್. ಇಂಗಳೆ, ಪಟ್ಟಣ ಪಂಚಾಯತಿ ಮುಖ್ಯಾಧಿಕಾರಿ ಡಿ. ಎನ್. ತಹಶೀಲ್ದಾರ, ಪಿ.ಎಸ್.ಐ. ಆಯ್. ಎಂ. ಹಿರೇಗೌಡರ, ಸಮುದಾಯದ ಆರೋಗ್ಯ ಅಧಿಕಾರಿ ಡಾ. ಶ್ರೀಮತಿ ಬಿ. ಎಸ್. ಬಳ್ಳೂರ, ತಾಲೂಕು ಪಶು ವೈದ್ಯಾಧಿಕಾರಿ ಡಾ. ಎಮ್. ವಿ. ಪಾಟೀಲ, ಕಂದಾಯ ನರೀಕ್ಷಕ ವಾಯ್. ಎಪ್. ಮುತ್ತೆನ್ನವರ, ಗ್ರಾಮ ಆಡಳಿತಾಧಿಕಾರಿ ಎಲ್. ಬಿ. ದಳವಾಯಿ, ಉಪ ತಹಶೀಲ್ದಾರ ಸಿದ್ದು ಕುಲಕರ್ಣಿ, ದಲಿತ ಮುಖಂಡರಾದ ಭಾಸ್ಕರ್ ಹಿರೇಮೆತ್ರಿ, ಸಂತೋಳ ಚನ್ನಮೇತ್ರಿ, ಕ.ಸಾ.ಪ. ಅಧ್ಯಕ್ಷ ತಮ್ಮಣ್ಣ ಕಾಮಣ್ಣವರ, ವಿಲ್ಸನ್ ಸೊಪ್ಪಡ್ಲ, ಲಕ್ಕಪ್ಪ ಹುಣಶೀಕಟ್ಟಿ, ಬಾಬು ಚನ್ನಮೇತ್ರಿ, ಫಕ್ಕೀರಪ್ಪ ತಳವಾರ, ಸೋಮು ರೈನಾಪೂರ, ಚಿದಂಬರ ಕಟ್ಟಿಮನ ಸೇರಿದಂತೆ ತಾಲೂಕಾ ಮಟ್ಟದ ಅಧಿಕಾರಿಗಳು ಹಾಗೂ ದಲಿತ ಸಂಘಟನೆ ಪದಾಧಿಕಾರಿಗಳು ಮತ್ತು ಸದಸ್ಯರು ಇದ್ದರು.

ಯಾದಗೂಡದಲ್ಲಿ ಸಂಭ್ರಮದ ಅಂಬೇಡ್ಕರ ಜಯಂತಿ

ಹುಕ್ಕೇರಿ : ತಾಲೂಕಿನ ಯಾದಗೂಡ ಗ್ರಾಮದಲ್ಲಿ ರವಿವಾರ ಭಾರತ ರತ್ನ ಡಾ.ಬಿ.ಆರ್.ಅಂಬೇಡ್ಕರ ಅವರ 133ನೇ ಜಯಂತಿ ಉತ್ಸವ ಆಚರಿಸಲಾಯಿತು.

ಅಂಬೇಡ್ಕರ ಪ್ರತಿಮೆಗೆ ಮಾಲಾರ್ಪಣೆ ಮಾಡಿ ನಮನ ಸಲ್ಲಿಸಿದ ಗ್ರಾಮ ಪಂಚಾಯಿತಿ ಅಧ್ಯಕ್ಷೆ ಶ್ರೀದೇವಿ ಲೈನದಾರ ಮಾತನಾಡಿ, ಅಂಬೇಡ್ಕರ ಜಯಂತಿಯನ್ನು ಸಾಮಾಜಿಕ ಸೌಹಾರ್ದ ಹಾಗೂ ಸಹೋದರತ್ವ ಸಂದೇಶ ಸಾರುವುದೇ ಈ ಕಾರ್ಯಕ್ರಮ ಉದ್ದೇಶ. ಬದಲಾಗಬೇಕಿರುವುದು ಸಂವಿಧಾನವಲ್ಲ, ಬದಲಿಗೆ ನಮ್ಮ ಮನಸ್ಸು. ಜನರಿಗೆ ಇದರ ಬಗ್ಗೆ ಅರಿವು ಮೂಡಿಸುವ ಅಗತ್ಯವಿದೆ ಎಂದರು.

ಛಲವಾದಿ ಮಹಾಸಭೆ ಜಿಲ್ಲಾ ಅಧ್ಯಕ್ಷ ಮಲ್ಲಿಕಾರ್ಜುನ ರಾಶಿಂಗೆ ಮಾತನಾಡಿ, ಯಾರೋ ಕೆಲವರು ಸಮಾಜದಲ್ಲಿ ಮೇಲು-ಕೀಳು ಎಂಬ ವ್ಯವಸ್ಥೆ ಸೃಷ್ಟಿಸಿದ್ದಾರೆ. ಜನಸಾಮಾನ್ಯರು ಸೌಹಾರ್ದತೆಯಿಂದ ಬಾಳ್ವೆ ನಡೆಸುತ್ತಿದ್ದರೂ ರಾಜಕೀಯ ಶಕ್ತಿಗಳು ಜನರ ನಡುವಿನ ಒಗ್ಗಟ್ಟು ಮುರಿಯಲು ಯತ್ನಿಸುತ್ತಿವೆ. ನಾವೆಲ್ಲ ಒಂದಾಗಿದ್ದೇವೆ. ನಮ್ಮೊಳಗೆ ಭೇದ-ಭಾವ ಇಲ್ಲ ಎಂಬುದನ್ನು ಸಮಾಜಕ್ಕೆ ತೋರಿಸಬೇಕಿದೆ ಎಂದರು.

ಗ್ರಾಪಂ ಸದಸ್ಯೆ ಮೀನಾಕ್ಷಿ ರಾಶಿಂಗೆ, ಮುಖಂಡರಾದ ಸುರೇಶ ಲೈನದಾರ, ಗೌತಮ ರಾಶಿಂಗೆ ಮತ್ತಿತರರು ಉಪಸ್ಥಿತರಿದ್ದರು.

ಅಂಬೇಡ್ಕರ ಅವರ ವಿಚಾರಗಳು ಅಜರಾಮರವಾಗಿ ಉಳಿಯಲಿವೆ- ಸಂಸದ ಈರಣ್ಣ ಕಡಾಡಿ

ಮೂಡಲಗಿ: ದೇಶದ ಪ್ರತಿಯೊಬ್ಬ ನಾಗರಿಕನು ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಸಮಾನ ಅವಕಾಶಗಳನ್ನು ಪಡೆದುಕೊಂಡು ಆರ್ಥಿಕವಾಗಿ, ಸಾಮಾಜಿಕವಾಗಿ, ಶೈಕ್ಷಣಿಕವಾಗಿ ಬೆಳೆದು ದೇಶದ ಅಭಿವೃದ್ಧಿಗಾಗಿ ಸರ್ವರೂ ಕೊಡುಗೆ ನೀಡಬಲ್ಲ ವ್ಯವಸ್ಥೆಯನ್ನು ಜಾರಿಗೆ ತರಲು ಸಂವಿಧಾನವನ್ನು ರಚಿಸಿದ ಧೀಮಂತ ನಾಯಕ ಸಂವಿಧಾನ ಶಿಲ್ಪಿ ಡಾ. ಬಾಬಾಸಾಹೇಬ್ ಅಂಬೇಡ್ಕರ ಅವರು ಎಂದು ರಾಜ್ಯಸಭಾ ಸಂಸದ ಈರಣ್ಣ ಕಡಾಡಿ ಹೇಳಿದರು.

ರವಿವಾರ (ಏ.14) ರಂದು ಕಲ್ಲೋಳಿ ಪಟ್ಟಣದ ಶ್ರೀ ಮಹಾಲಕ್ಷಿ ?ಮೇ ಸೌಹಾರ್ದ ಸಹಕಾರಿ ಸಂಘದ ಕಾರ್ಯಾಲಯದಲ್ಲಿ ಡಾ. ಬಿ.ಆರ್. ಅಂಬೇಡ್ಕರ ಅವರ 133 ನೇ ಜಯಂತಿ ಉತ್ಸವ ಕಾರ್ಯಕ್ರಮದಲ್ಲಿ ಅಂಬೇಡ್ಕರ ಅವರ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸಿ ಮಾತನಾಡಿದ ಅವರು ಡಾ. ಬಿ.ಆರ್. ಅಂಬೇಡ್ಕರ ಅವರು ತಾವು ಜನಸಿದ ಕುಟುಂಬದಲ್ಲಿನ ಕೀಳರಿಮೆಯ ಮನಸ್ಥಿತಿ ಮತ್ತು ಬಡತನವನ್ನು ಮೆಟ್ಟಿನಿಂತು ಅಗಾದವಾದ ಅಧ್ಯಯನದ ಮೂಲಕ ಸಮಾಜದಲ್ಲಿ ಸಮಾನತೆ ಮತ್ತು ಸಾಮರಸ್ಯ ತರುವ ನಟ್ಟಿನಲ್ಲಿ ತಮ್ಮ ಬದುಕನ್ನೇ ಸಮರ್ಪಿಸಿದರು ಎಂದರು.

ಅಂಬೇಡ್ಕರರ ಚಿಂತನೆಗಳು ಮತ್ತು ಇಂದಿನ ಭಾರತೀಯ ಜನತಾ ಪಾರ್ಟಿಯ ಚಿಂತನೆಗಳು ಬಹಳಷ್ಟು ಸಾಮ್ಯತೆಯನ್ನು ಹೊಂದಿವೆ. ಅವರ ಚಿಂತನೆಯನ್ನು ಅನುಷ್ಠಾನಗೊಳಿಸಿ ಸರ್ವರಿಗೂ ಸಮಬಾಳು, ಸರ್ವರಿಗೂ ಸಮಪಾಲಿನ ಜೀವನವನ್ನು ಒದಗಿಸಿ ದೇಶದಲ್ಲಿ ಏಕತೆ ಭಾವನೆಯನ್ನು ಮೂಡಿಸುವುದೇ ಭಾರತೀಯ ಜನತಾ ಪಾರ್ಟಿಯ ಕೇಂದ್ರ ಸರ್ಕಾರದ ಆಶಯವಾಗಿದೆ. ಪ್ರಧಾನ ನರೇಂದ್ರ ಮೋದಿ ಅವರ ನೇತೃತ್ವದ ಬಿಜೆಪಿ ಸರಕಾರವು ಡಾ. ಅಂಬೇಡ್ಕರ್ ಅವರ ಜೀವನದಲ್ಲಿನ ಐದು ಪ್ರಮುಖ ಸ್ಥಳಗಳನ್ನು ಪಂಚ ತೀರ್ಥ ಕ್ಷೇತ್ರ ಎಂದು ಘೋಷಿಸಿ ಅಭಿವೃದ್ಧಿ ಪಡಿಸುತ್ತಿರುವುದು ನಮ್ಮ ಪಕ್ಷದ ಆಶಯಕ್ಕೆ ಹಿಡಿದ ಕೈಗನ್ನಡಿಯಾಗಿದೆ ಎಂದರು.

ಬಿಡಿಸಿಸಿ ಬ್ಯಾಂಕ್ ನರ್ದೇಶಕ ಹಾಗೂ ಸಹಕಾರಿ ನರ್ದೇಶಕ ಸತೀಶ ಕಡಾಡಿ, ಪ್ರಧಾನ ವ್ಯವಸ್ಥಾಪಕ ಹಣಮಂತ ಕಲಕುಟ್ರಿ, ಶಾಖಾ ವ್ಯವಸ್ಥಾಪಕ ಪರಪ್ಪ ಗಿರೆಣ್ಣವರ, ಶಂಕರ ಕೌಜಲಗಿ, ಶಿವಾನಂದ ಬಡಿಗೇರ